# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 594 |
| ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತಾರಾದವರು) |
| ಉತ್ತರಿಸಬೇಕಾದ ದಿನಾಂಕ | : | 21.02.2022 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

<table>
<tr><th>ಕ್ರಸ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೋಲಾರ ಜಿಲ್ಲೆಯಲ್ಲಿರುವ ಶಾಲೆಗಳಲ್ಲಿ ಶುದ್ದ ಕುಡಿಯುವ ನೀರಿನ ಕೊರತೆ ಹಾಗೂ ಶೌಚಾಲಯ ಕೊರತೆಯಿರುವ ಶಾಲೆಗಳ ಸಂಖ್ಯೆಯೆಷ್ಟು; ಈ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮವನ್ನು ತೆಗೆದುಕೊಂಡಿದೆ;</td><td>ಕೋಲಾರ ಜಿಲ್ಲೆಯಲ್ಲಿ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ, ಶುದ್ದ ಕುಡಿಯುವ ನೀರಿನ ಕೊರತೆ ಹಾಗೂ ಶೌಚಾಲಯ ಕೊರತೆಯಿರುವ ಶಾಲೆಗಳ ಸಂಖ್ಯೆ ಕೆಳಕಂಡಂತಿದೆ.
<table>
<tr><th>ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆ</th><th>ಶುದ್ದ ಕುಡಿಯುವ ನೀರಿನ ಕೊರತೆಯಿರುವ ಶಾಲೆಗಳ ಸಂಖ್ಯೆ</th><th>ಶೌಚಾಲಯ ಕೊರತೆಯಿರುವ ಶಾಲೆಗಳ ಸಂಖ್ಯೆ</th></tr>
<tr><td>1926</td><td>78</td><td>71</td></tr>
</table>
ಜಲ ಜೀವನ್ ಮಿಷನ್ ಯೋಜನೆಯಡಿ ಶುದ್ದ ಕುಡಿಯುವ ನೀರು ಸೌಲಭ್ಯ ಒದಗಿಸಲು ಕ್ರಮವಹಿಸಿದೆ.<br><br>2021-22ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ ಶೌಚಾಲಯ ನಿರ್ಮಾಣ/ ದುರಸ್ತಿ ಮತ್ತು ನೀರಿನ ಸಂಪರ್ಕ ಒದಗಿಸಲು ಮುಂದುವರೆದ ಕಾರ್ಯಕ್ರಮದಡಿ ಮತ್ತು ಮಹಾತ್ಮ ಗಾಂಧಿ ನರೇಗ ಒಗ್ಗೂಡಿಸುವಿಕೆಯ ಮೂಲಕ ಅನುಷ್ಠಾನಗೊಳಿಸಲು ರಾಜ್ಯ ವಲಯದಿಂದ ರೂ.122.00 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ ಹಾಗೂ ನರೇಗಾ ಯೋಜನೆಯಡಿ ರೂ.183.00 ಲಕ್ಷಗಳು ನಿಗಧಿಯಾಗಿದ್ದು 71 ಶಾಲೆಗಳ ಶೌಚಾಲಯ ನಿರ್ಮಾಣ/ದುರಸ್ತಿ ಕಾರ್ಯದ ಬಗ್ಗೆ ಕ್ರಮವಹಿಸಿದೆ.</td></tr>
<tr><td>ಆ)</td><td>ಕಳೆದ 3 ವರ್ಷಗಳಿಂದ ಶಾಲೆಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಹಾಗೂ ಶೌಚಾಲಯಗಳನ್ನು ನಿರ್ಮಾಣ ಮಾಡಲು ಸರ್ಕಾರ ಎಷ್ಟು ಅನುದಾನವನ್ನು ನಿಗದಿಪಡಿಸಿದೆ?</td><td>2019-20 ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ ಶೌಚಾಲಯ ನಿರ್ಮಾಣ/ ದುರಸ್ತಿ ಮತ್ತು ನೀರಿನ ಸಂಪರ್ಕ ಒದಗಿಸಲು ರಾಜ್ಯ ವಲಯದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ.</td></tr>
</table>

| | | |
|---|---|---|
| | | 2020–21ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ ಶೌಚಾಲಯ ನಿರ್ಮಾಣ/ದುರಸ್ತಿ ಮತ್ತು ನೀರಿನ ಸಂಪರ್ಕ ಒದಗಿಸಲು ಮುಂದುವರೆದ ಕಾರ್ಯಕ್ರಮದಡಿ ಮತ್ತು ಮಹಾತ್ಮ ಗಾಂಧಿ ನರೇಗ ಒಗ್ಗೂಡಿಸುವಿಕೆಯ ಮೂಲಕ ಅನುಷ್ಠಾನಗೊಳಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ರೂ2920.99 ಲಕ್ಷಗಳು ಮಂಜೂರಾಗಿದ್ದು ಅದರಲ್ಲಿ ಕೋಲಾರ ಜಿಲ್ಲೆಗೆ ರೂ.101.82ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.<br>2021–22ನೇ ಸಾಲಿನಲ್ಲಿ ಸರ್ಕಾರಿ ಶಾಲೆಗಳ ಶೌಚಾಲಯ ನಿರ್ಮಾಣ/ದುರಸ್ತಿ ಮತ್ತು ನೀರಿನ ಸಂಪರ್ಕ ಒದಗಿಸಲು ಮುಂದುವರೆದ ಕಾರ್ಯಕ್ರಮದಡಿ ಮತ್ತು ಮಹಾತ್ಮ ಗಾಂಧಿ ನರೇಗ ಒಗ್ಗೂಡಿಸುವಿಕೆಯ ಮೂಲಕ ಅನುಷ್ಠಾನಗೊಳಿಸಲು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ರೂ.3500.00 ಲಕ್ಷಗಳು ಮಂಜೂರಾಗಿದ್ದು ಅದರಲ್ಲಿ ಕೋಲಾರ ಜಿಲ್ಲೆಗೆ ರೂ.122.00 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ ಹಾಗೂ ನರೇಗಾ ಯೋಜನೆಯಡಿ ರೂ.183.00 ಲಕ್ಷಗಳು ನಿಗಧಿಯಾಗಿದ್ದು 71 ಶಾಲೆಗಳ ಶೌಚಾಲಯ ನಿರ್ಮಾಣ/ದುರಸ್ತಿ ಕಾರ್ಯದ ಬಗ್ಗೆ ಕ್ರಮವಹಿಸಿದೆ. |

ಇಪಿ 51 ಯೋಸಕ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು